# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 874 |
| ಸದಸ್ಯರ ಹೆಸರು | : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : 13-12-2023 |
| ಉತ್ತರಿಸುವ ಸಚಿವರು | : ಮಾನ್ಯ ವಸತಿ, ವಕ್ಫ್, ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು. |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿರುವ ಮೌಲಾನಾ ಆಜಾದ್ ವಸತಿ ಶಾಲೆಗಳ ಸಂಖ್ಯೆ ಎಷ್ಟು; ಸದರಿ ಶಾಲೆಗಳಲ್ಲಿ ಯಾವ ತರಗತಿಯವರೆಗೆ ಬೋಧನೆಗೆ ಅವಕಾಶ ನೀಡಲ್ಲಾಗಿದೆ: | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಒಟ್ಟು 200 ಮೌಲಾನಾ ಆಜಾದ್ ಮಾದರಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 6 ರಿಂದ 10ನೇ ತರಗತಿಯವರೆಗೆ (Day School) ಬೋಧನೆಗೆ ಅವಕಾಶ ಕಲ್ಪಿಸಲಾಗಿದೆ. |
| ಆ) | ಮೌಲಾನಾ ಆಜಾದ್ ಶಾಲೆಗಳಿಗೆ ಎಷ್ಟು ಬೋಧಕ/ಬೋಧಕೇತರ ಹುದ್ದೆಗಳನ್ನು ಸೃಜಿಸಲಾಗಿದೆ; | 100 ಮೌಲಾನಾ ಆಜಾದ್ ಮಾದರಿ ಶಾಲೆಗಳಿಗೆ 700 ಬೋಧಕ/ಬೋಧಕೇತರ ಹುದ್ದೆಗಳನ್ನು ಸೃಜಿಸಲಾಗಿದೆ. |
| ಇ) | ಸದರಿ ಹುದ್ದೆಗಳಿಗೆ ಶಿಕ್ಷಕರನ್ನು ನೇರ ನೇಮಕಾತಿ ಮಾಡಿಕೊಳ್ಳದೆ, ನಿಯೋಜನೆ/ ಎರವಲು ಸೇವೆಯ ಮೇಲೆ ಶಿಕ್ಷಕರನ್ನು ಬಳಕೆ ಮಾಡಲಾಗುತ್ತಿದೆಯೇ: | ಭೋದಕ ಸಿಬ್ಬಂದಿಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲಾಗುತ್ತಿದ್ದು, ಖಾಲಿ ಇರುವ ಹುದ್ದೆಗೆ ಅತಿಥಿ ಶಿಕ್ಷಕರ ಸೇವೆಯನ್ನು ಪಡೆಯುತ್ತಿರುವ ಕಾರಣ ನಿಯೋಜನೆ/ ಎರವಲು ಸೇವೆಯ ಮೇಲೆ ಯಾವುದೇ ಶಿಕ್ಷಕರನ್ನು ಪಡೆದಿರುವುದಿಲ್ಲ. |
| ಈ) | ಹಾಗಾದಲ್ಲಿ, ಎಷ್ಟು ಮಂದಿ ಶಿಕ್ಷಕರನ್ನು ನಿಯೋಜನೆ/ಎರವಲು ಸೇವೆ ಮೇಲೆ ಬಳಕೆ ಮಾಡಿಕೊಳ್ಳಲಾಗುತ್ತಿದೆ: (ವಿಷಯವಾರು ಮಾಹಿತಿ ನೀಡುವುದು) | ಉದ್ಭವಿಸುವುದಿಲ್ಲ. |
| ಉ) | ಇದರಿಂದ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿಯಾಗುತ್ತಿಲ್ಲವೇ: | ಉದ್ಭವಿಸುವುದಿಲ್ಲ. |

| | | |
|---|---|---|
| ಊ) | ಸದರಿ ಶಾಲೆಗಳಿಗೆ ಯಾವ ಕಾಲಮಿತಿಯಲ್ಲಿ ನೇರ ನೇಮಕಾತಿ ಮಾಡಿಕೊಳ್ಳಲಾಗುವುದು? | ಹುದ್ದೆ ಮಂಜೂರಾದ 100 ಶಾಲೆಗಳಲ್ಲಿ 700 ಭೋದಕ/ಬೋಧಕೇತರ ಹುದ್ದೆಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡುತ್ತಿದ್ದು ಒಟ್ಟು 673 ಹುದ್ದೆಗಳಿಗೆ ಆಯ್ಕೆಪಟ್ಟಿಯನ್ನು ಪ್ರಕಟಿಸಿದ್ದು, ಅದರಲ್ಲಿ 481 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶವನ್ನು ನೀಡಲಾಗಿರುತ್ತದೆ ಹಾಗೂ 164 ಹುದ್ದೆಗಳಿಗೆ ಹೆಚ್ಚುವರಿ ಆಯ್ಕೆಪಟ್ಟಿ ಕರ್ನಾಟಕ ಲೋಕಸೇವಾ ಆಯೋಗದಿಂದ ಸ್ವೀಕೃತವಾದ ನಂತರ ನಿಯಮಾನುಸಾರ ನೇಮಕಾತಿ ಆದೇಶ ನೀಡಲು ಕ್ರಮವಹಿಸಲಾಗುವುದು. |

ಸಂಖ್ಯೆ: MWD 128 LMQ 2023

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತುಅಲ್ಪಸಂಖ್ಯಾತರ ಕಲ್ಯಾಣ
ಸಚಿವರು